ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಖಾಸಗಿ ಶಾಲೆಗಳ ಪಠ್ಯಕ್ರಮ ಅನುಕೂಲಗಳ ಕುರಿತು

ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-

39(158) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಶಾಲೆಗಳ ಪಠ್ಯಕ್ರಮ, ಅನುಕೂಲಗಳಿಗೆ ಸರಿಸಮನಾಗಿ ಅಥವಾ ಇನ್ನೂ ಉತ್ತಮವಾಗಿ ಸರ್ಕಾರಿ ಶಾಲೆಗಳ ಶಿಕ್ಷಣದ ಬದಲಾವಣೆ ತರಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಆ) ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು; ಇಲ್ಲವಾದರೆ ಕಾರಣಗಳೇನು;

(ಇ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು;

(ಈ) ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಭಾಷಾ ಶಿಕ್ಷಣ ನೀಡಲಾಗುವುದೇ; ಹೌದಾದರೆ ಅದರ ವಿವರ ನೀಡುವುದು; ಇಲ್ಲವಾದರೆ ಕಾರಣಗಳೇನು?